ವಿದ್ಯಾರ್ಥಿಗಳಿಗೆ 75 ವಿದ್ಯಾರ್ಥಿನಿಲಯಗಳನ್ನು 1995-96ನೇ ಸಾಲಿನಲ್ಲಿ ಪ್ರಾರಂಭಿಸಲು ಉದ್ದೇಶಿಸಲಾಗಿದೆ.

ಆ) ಕಿರುಗಾವಲು ವಿಧಾನ ಸಭಾ ಕ್ಷೇತ್ರದಲ್ಲಿ ವಿದ್ಯಾರ್ಥಿನಿಲಯ ಪ್ರಾರಂಭ ಮಾಡಲು ಸಾಕಷ್ಟು ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳು ಲಭ್ಯವಿದ್ದಾರೆ. 1995-96ನೇ ಸಾಲಿನಲ್ಲಿ ಈ ಕ್ಷೇತ್ರದಲ್ಲಿ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸುವ ಬಗ್ಗೆ ಪರಿಶೀಲಿಸಲಾಗುವುದು. ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾಂತರ ಅರ್ಹ ವಿದ್ಯಾರ್ಥಿಗಳ ಲಭ್ಯತೆಯ ಬಗ್ಗೆ ಮತ್ತು ವಿದ್ಯಾರ್ಥಿನಿಲಯದ ಅವಶ್ಯಕತೆಯ ಬಗ್ಗೆ ಸಮೀಕ್ಷೆ ನಡೆಸಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಮಂಡ್ಯ ಜಿಲ್ಲೆಯ ಕಾಳಮುದ್ದನ ದೊಡ್ಡಿ ಸಕ್ಕರೆ ಕಾರ್ಖಾನೆಯಿಂದ ಆಗುತ್ತಿರುವ ಪರಿಸರ ಮಾಲಿನ್ಯ

627- ಶ್ರೀ ಕೆ.ಎಸ್. ನಾಗೇಗೌಡ (ಕಿರುಗಾವಲು) : ಮಾನ್ಯ ಸಕ್ಕರೆ,ಜವಳಿ, ವಿಜ್ಞಾನ ಮತ್ತು ಯಂತ್ರ ಕಲೆ ಹಾಗೂ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮಂಡ್ಯ ಜಿಲ್ಲೆಯಲ್ಲಿರುವ ಕಾಳಾಮುದ್ದಿನ ದೊಡ್ಡಿ ಸಕ್ಕರೆ ಕಾರ್ಖಿನೆಯವರು ಕೊಳೆಯನ್ನು ಬಹಿರಂಗವಾಗಿ ಬಯಲಿಗೆ ಬಿಟ್ಟು ಪರಿಸರ ಕೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಬಂದಿದ್ದರೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?*

ಶ್ರೀ ಪಿ.ಸಿ. ಸಿದ್ದನಗೌಡರ್ (ಸಕ್ಕರೆ, ಜವಳಿ, ವಿಜ್ಞಾನ ಮತ್ತು ಯಂತ್ರ ಕಲೆ, ಜೀವಶಾಸ್ತ್ರ ಮತ್ತು ಪರಿಸರ ಖಾತೆ ರಾಜ್ಯ ಸಚಿವರು) :

ಅ) ಮಂಡ್ಯ ಜಿಲ್ಲೆಯಲ್ಲಿನ, ಕಾಳಾಮುದ್ದನದೊಡ್ಡಿಯಲ್ಲಿ ಶ್ರೀ ಚಾಮುಂಡೇಶ್ವರಿ ಸಕ್ಕರೆ ಕಾರ್ಖಿನೆಯ ಕಲುಷಿತ ನೀರನ್ನು ಶುದ್ಧೀಕರಿಸಲು ಸಂಸ್ಕರಣ ಘಟಕಗಳನ್ನು ಅಳವಡಿಸಿದೆ. ಈ ಘಟಕಗಳಿಂದ ಶುದ್ಧೀಕರಿಸಲ್ಪಟ್ಟ ನೀರನ್ನು ಉದ್ದಿಮೆಯ 14 ಎಕ್ಕರೆ ಜಮೀನಿನಲ್ಲಿ ಹಾಗೂ ಸುತ್ತಮುತ್ತಲಿನ ರೈತರ ಜಮೀನಿನಲ್ಲಿ ವ್ಯವಸಾಯಕ್ಕೆ ಉಪಯೋಗಿಸಲಾಗುತ್ತಿದೆ. ಇದರಿಂದ ಪರಿಸರ ಕೆಟ್ಟಿರುವುದಿಲ್ಲ ಹಾಗೂ ಈ ಬಗ್ಗೆ ಸಾರ್ವಜನಿಕರಿಂದ ದೂರು ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ವಿದೇಶಿ ಕಂಪೆನಿಗಳು ಹೂಡಿರುವ ಬಂಡವಾಳ

626 - ಶ್ರೀ ಕೆ.ಎನ್. ನಾಗೇಗೌಡ (ಕಿರುಗಾವಲು) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಎಷ್ಟು ವಿದೇಶಿ ಕಂಪೆನಿಗಳು ಬಂಡವಾಳ ಹೂಡಿದ್ದಾರೆ ಹಾಗೂ ಯಾವ ಯಾವ ಕಂಪೆನಿಗಳು ಎಂ.ಪಿ.ಯು.ಎಸ್ ಸಹಿ ಹಾಕಿದ್ದಾರೆ?*

ಆ) *ಯಾವ ಯೋಜನೆಗಳನ್ನು ಅಂದಾಜು ಉತ್ಪಾದನೆಗಳ ಬಗ್ಗೆ ತಯಾರಿಸಲಾಗಿದೆ ಎಂಬ ಬಗ್ಗೆ ವಿವರ ನೀಡುವುದು?*

ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು):

ಅ) ಕೇಂದ್ರ ಸರ್ಕಾರ ಜುಲೈ 1991ರಲ್ಲಿ ಘೋಷಿಸಿದ ಹೊಸ ಉದಾರಗೊಳಿಸಿದ ಆರ್ಥಿಕ ಹಾಗೂ ಕೈಗಾರಿಕಾ ನೀತಿಯ ನಂತರ ರಾಜ್ಯ (ಏಕ ಗವಾಕ್ಷಿ ಎಜೆನ್ಸಿ ಮತ್ತು)ಮಟ್ಟದ ಸಮಿತಿಗಳು 28 ವಿದೇಶಿ ಬಹುರಾಷ್ಟ್ರೀಯ ಕಂಪೆನಿಗಳಿಗೆ ಕರ್ನಾಟಕದಲ್ಲಿ ಕೈಗಾರಿಕೆ ಸ್ಥಾಪಿಸಲು ಅನುಮತಿ ನೀಡಿದೆ. ಈ ಕೈಗಾರಿಕೆಗಳಲ್ಲಿ ಒಟ್ಟು 672.73 ಕೋಟಿ ರೂಪಾಯಿಗಳ ಬಂಡವಾಳ ಹೂಡುವ ಅಂದಾಜು ಇದೆ. ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. ಸರ್ಕಾರ ಯಾವುದೇ ವಿದೇಶಿ ಕಂಪನಿಗಳೊಂದಿಗೆ ಒಪ್ಪಂದಕ್ಕೆ (ಎಂಒಯು) ಸಹಿ ಹಾಕಿರುವುದಿಲ್ಲ.

ಆ) ವಿವರಗಳನ್ನು ಅನುಬಂಧದಲ್ಲಿ ನೋಡಬಹುದು.